**<u>1 ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ</u>**

**<u>ನ್ಯಾಯಾಲಯ, ಟಿ.ನರಸೀಪುರ</u>**

**<u>ದಿನಾಂಕ 2 ನೇ ಮಾರ್ಚ್ 20256</u>**

**<u>ಸಿ.ಸಿ ಸಂಖ್ಯೆ : 592/2026</u>**

**ಪಿರ್ಯಾದಿ** : ರಾಜ್ಯದ ಪರವಾಗಿ ತಲಕಾಡು ಪೋಲೀಸ್ ಠಾಣೆ,

**ವಿರುದ್ಧ**

**ಆರೋಪಿಗಳು** : ರಂಗಸ್ವಾಮಿ.ಟಿ.ಜಿ ಬಿನ್ ಲೇಟ್ ಗೋವಿಂದ, 46 ವರ್ಷ,
ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

**<u>ಆಪಾದನೆ</u>**

**<u>ಶ್ರೀಮತಿ ಎನ್.ನಿವೇದಿತಾ, 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು, ಆರೋಪಿಯಾದ ನಿಮ್ಮ ವಿರುದ್ಧ ಮಾಡುವ ಆರೋಪಣೆ ಏನೆಂದರೆ</u>**

ದಿನಾಂಕಃ 30/12/2025 ರಂದು ಸಂಜೆ 6.40 ಗಂಟೆ ಸಮಯದಲ್ಲಿ ತಲಕಾಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ, ತಲಕಾಡು-ಮುಡುಕುತೊರೆ ಮುಖ್ಯ ರಸ್ತೆಯ ತಲಕಾಡಿನ ಶಿವ ಪಾರ್ವತಿ ಕಲ್ಯಾಣ ಮಂಟಪದ ಮುಂಭಾಗದ ರಸ್ತೆಯಲ್ಲಿ, ಚಾಸಾ.2 ರವರು ಕೆಎ-05-ಇಆರ್-1374 ರ ಮೋಟಾರು ಸೈಕಲ್ ಅನ್ನು ತಲಕಾಡು ರಸ್ತೆ ಕಡೆಯಿಂದ ಮುಡುಕುತೊರೆ ರಸ್ತೆ ಕಡೆಗೆ  ಹೋಗುತ್ತಿರುವಾಗ, ಆರೋಪಿಯಾದ ನೀವು ಕೆಎ-55-ಎಸ್-8220 ರ ಮೋಟಾರು ಸೈಕಲ್ ಅನ್ನು ಮುಡುಕುತೊರೆ ರಸ್ತೆ ಕಡೆಯಿಂದ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿರುತ್ತೀರಿ, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 281 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ, ಆರೋಪಿಯಾದ ನೀವು ಮೇಲ್ಕಂಡ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು, ಚಾಸಾ.2 ರವರ ಮೋಟಾರು ಸೈಕಲ್ ಗೆ ಡಿಕ್ಕಿ ಮಾಡಿದ ಪರಿಣಾಮ,ಚಾಸಾ-2 ರವರು ಮೋಟಾರು ಸೈಕಲ್ ಸಮೇತ ಕೆಳಕ್ಕೆ ಬಿದ್ದು, ಬಲಗಾಲಿಗೆ, ಬಲಭುಜಕ್ಕೆ, ಎಡಪಾದಕ್ಕೆ, ಬಲಪಾದಕ್ಕೆ ಸಾಮಾನ್ಯ ಸ್ವರೂಪದ ಪೆಟ್ಟಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **125(a)** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಕೊನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ, ಆರೋಪಿಯಾದ ನೀವು ಮೇಲ್ಕಂಡ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು, ಚಾಸಾ.2 ರವರ ಮೋಟಾರು ಸೈಕಲ್ ಗೆ ಡಿಕ್ಕಿ ಮಾಡಿದ ಪರಿಣಾಮ,ಚಾಸಾ-2 ರವರು ಮೋಟಾರು ಸೈಕಲ್ ಸಮೇತ ಕೆಳಕ್ಕೆ ಬಿದ್ದು, ಬಲಗಾಲಿಗೆ, ಬಲಭುಜಕ್ಕೆ, ಎಡಪಾದಕ್ಕೆ, ಬಲಪಾದಕ್ಕೆ ತೀವ್ರ ಸ್ವರೂಪದ ಪೆಟ್ಟಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **125(b)** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

**ಪ್ರಶ್ನೆ**: 1: ಆರೋಪಣೆ ಓದಿ ಹೇಳಿದುದು ಅರ್ಥವಾಯಿತೇ?
**ಉತ್ತರ** :

**ಪ್ರಶ್ನೆ**: 2: ಶಿಕ್ಷೆಗೆ ಒಪ್ಪುತ್ತೀರೋ ಅಥವಾ ನಿಮ್ಮದೇನಾದರೂ ವಿಚಾರಣೆಯಾಬೇಕಾ ?
**ಉತ್ತರ** :

ಈ ಮೇಲಿನ ಆಪಾದನೆಯನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ ವಿವರಿಸಿದ ನಂತರ ಅವರು ನೀಡಿದ ಉತ್ತರವನ್ನು ನನ್ನ ಸ್ವಂತ ಬರಹದಲ್ಲಿ ದಾಖಲೆ ಮಾಡಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ.

ಓ ಹೇ ಕೇ ಸ ಇ ಓ

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರದನ್ಯಾದಂ., ಟಿ.ನರಸೀಪುರ.**

ಪ್ರಕರಣವನ್ನು ಕರೆಯಲಾಯಿತು. ಆರೋಪಿಯು ಹಾಜರಿದ್ದು ದೋಷಾರೋಪಣಾ ಪತ್ರವನ್ನು ಒದಗಿಸಲಾಯಿತು. ಆರೋಪಣೆಯನ್ನು ಆರೋಪಿಗೆ ಓದಿ ಹೇಳಲಾಗಿ, ಅರ್ಥೈಸಿಕೊಂಡು ತಮ್ಮ ತಪ್ಪನ್ನು ಒಪ್ಪಿಕೊಂಡಿರುಸತ್ತಾರೆ. ಅವರ ತಪ್ಪೊಪ್ಪಿಗೆಯು ಸ್ವ-ಇಚ್ಛೆಯಿಂದ ಕೂಡಿದ್ದೆಂದು ಮನವರಿಕೆಯಾಗಿದೆ.

ಆದ್ದರಿಂದ ಭಾರತೀಯ ನ್ಯಾಯ ಸಂಹಿತೆ ಕಲಂ.281ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧಕ್ಕೆ ಆರೋಪಿಗೆ ಶಿಕ್ಷೆ ವಿಧಿಸಿದ್ದು ರೂ.1,000/- ದಂಡವನ್ನು ಪಾವತಿಸತಕ್ಕದ್ದು ಎಂದು ಆದೇಶಿಸಿರುತ್ತೇನೆ.

ಆದ್ದರಿಂದ ಭಾರತೀಯ ದಂಡ ಸಂಹಿತೆ ಕಲಂ.125(**a**)ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧಕ್ಕೆ ಆರೋಪಿಗೆ ಶಿಕ್ಷೆ ವಿಧಿಸಿದ್ದು ರೂ.500/- ದಂಡವನ್ನು ಪಾವತಿಸತಕ್ಕದ್ದು ಎಂದು ಆದೇಶಿಸಿರುತ್ತೇನೆ.

ಆದ್ದರಿಂದ ಭಾರತೀಯ ದಂಡ ಸಂಹಿತೆ ಕಲಂ.125(**b**) ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧಕ್ಕೆ ಆರೋಪಿಗೆ ಶಿಕ್ಷೆ ವಿಧಿಸಿದ್ದು ರೂ.1,000/- ದಂಡವನ್ನು ಪಾವತಿಸತಕ್ಕದ್ದು ಎಂದು ಆದೇಶಿಸಿರುತ್ತೇನೆ.

ಪಿ ಎಫ್ ಸಂಖ್ಯೆ 07/2026 ಕ್ಕೆ ಸಂಬಂಧಿಸಿದಂತೆ ಐಟಂ ನಂ.1 ನ್ನು ಈಗಾಗಲೇ ಅರ್ಜಿದಾರರ ವಶಕ್ಕೆ ನೀಡಲಾಗಿರುತ್ತದೆ.

**Call before Lok Adalath by** 14/03/2026.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ. ದ. ನ್ಯಾ ದಂ., ಟಿ.ನರಸೀಪುರ.**